146

# ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1. | ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ | : | 1418 |
| 2. | ಸದಸ್ಯರ ಹೆಸರು | : | ಶ್ರೀ ರಾಮೋಜಿಗೌಡ (ಪದವೀಧರರ ಕ್ಷೇತ್ರ) |
| 3. | ಉತ್ತರಿಸುವ ದಿನಾಂಕ | : | 20-03-2025 |
| 4. | ಉತ್ತರಿಸುವ ಸಚಿವರು | : | ಮುಖ್ಯಮಂತ್ರಿ |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಸರ್ಕಾರದ ಎಲ್ಲಾ ಇಲಾಖೆಗಳಲ್ಲಿ ವೃಂದ ಮತ್ತು ನೇಮಕಾತಿ ನಿಯಮಗಳನ್ನು ತ್ವರಿತವಾಗಿ ರೂಪಿಸುವ ಹಾಗೂ ಮೂರು ವರ್ಷಗಳಿಗೊಮ್ಮೆ ಪರಿಶೀಲಿಸುವ ಕುರಿತು ಸರ್ಕಾರದಿಂದ ಆದೇಶ ಮತ್ತು ಸುತ್ತೋಲೆಗಳನ್ನು ಹೊರಡಿಸಲಾಗಿದೆಯೇ; ಹಾಗಿದ್ದಲ್ಲಿ, ಇಲಾಖೆಗಳಿಗೆ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಪರಿಷ್ಕರಿಸಲು ಅಗತ್ಯ ಕಾರಣಗಳು ಏನು; ಯಾವ ಉದ್ದೇಶಗಳಿಗಾಗಿ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಪರಿಷ್ಕರಿಸಲಾಗುತ್ತದೆ; (ಮಾಹಿತಿ ನೀಡುವುದು) | ರಾಜ್ಯ ಸರ್ಕಾರದ ಎಲ್ಲಾ ಇಲಾಖೆ/ಅಧೀನ ಇಲಾಖೆಗಳಲ್ಲಿ ಚಾಲ್ತಿಯಲ್ಲಿರುವ ವೃಂದ ಮತ್ತು ನೇಮಕಾತಿ ನಿಯಮಗಳ ರಚನೆ/ಪರಿಷ್ಕರಣೆಗೆ ಸಂಬಂಧಿಸಿದಂತೆ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯಿಂದ ಕಾಲಕಾಲಕ್ಕೆ ಎಲ್ಲಾ ಇಲಾಖೆಗಳಿಗೆ ಈ ಕೆಳಕಂಡ ಸರ್ಕಾರದ ಆದೇಶ/ಸುತ್ತೋಲೆಗಳ ಮೂಲಕ ಮಾರ್ಗಸೂಚಿಗಳನ್ನು ನೀಡಲಾಗಿದೆ:<br>1. **ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 97 ಸೇನಿಡಿ 2004, ದಿನಾಂಕ: 08-10-2004**<br>2. **ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 82 ಸೇನಿಡಿ 2006, ದಿನಾಂಕ: 13-08-2007**<br>3. **ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 130 ಸೇನಿಡಿ 2007, ದಿನಾಂಕ: 08-10-2007**<br>4. **ಸುತ್ತೋಲೆ ಸಂಖ್ಯೆ: ಸಿಆಸುಇ 140 ಸೇನಿಇ 2010, ದಿನಾಂಕ: 07-04-2011**<br>5. **ಸುತ್ತೋಲೆ ಸಂಖ್ಯೆ: ಸಿಆಸುಇ 66 ಸೇನಿಡಿ 2019, ದಿನಾಂಕ: 25-09-2019**<br>6. **ಸುತ್ತೋಲೆ ಸಂಖ್ಯೆ: ಸಿಆಸುಇ 17 ಸೇನಿಡಿ 2020, ದಿನಾಂಕ: 06-07-2020**<br><br>ರಾಜ್ಯ ಸಿವಿಲ್ ಸೇವೆಗೆ ಸೇರಿದ ಎಲ್ಲಾ ಹುದ್ದೆಗಳನ್ನು ವೃಂದ ಮತ್ತು ನೇಮಕಾತಿ ನಿಯಮಗಳ ಅನ್ವಯವೇ ತುಂಬಬೇಕಿರುತ್ತದೆ. ವೃಂದ ಮತ್ತು ನೇಮಕಾತಿ ನಿಯಮಗಳನ್ನು ಕಾಲಕಾಲಕ್ಕೆ ಸಮಗ್ರವಾಗಿ ಪರಿಷ್ಕರಿಸುವುದರಿಂದ ಇಲಾಖೆಯ ಅಗತ್ಯತೆಗೆ ತಕ್ಕಂತೆ ವಿದ್ಯಾರ್ಹತೆ, ತಾಂತ್ರಿಕ ಪರಿಣಿತಿ ಹೊಂದಿರುವ ಸಿಬ್ಬಂದಿಯನ್ನು ನೇಮಕ ಮಾಡಿಕೊಳ್ಳಲು ಸಹಾಯಕವಾಗುವುದು. ಇದಲ್ಲದೆ, ನೇರ ನೇಮಕಾತಿ ಮತ್ತು ಮುಂಬಡ್ತಿ ಪ್ರಮಾಣವನ್ನು ನಿರ್ಧರಿಸಿ ವೃಂದ |

| | | |
|---|---|---|
| | | ನಿರ್ವಹಣೆಯನ್ನು ಸಮರ್ಪಕವಾಗಿ ಮಾಡಲು ಅನುಕೂಲವಾಗುವುದು. |
| ಆ) | 2004 ರಿಂದ ಇಲ್ಲಿಯವರೆಗೆ ಸರ್ಕಾರದಿಂದ ಹಲವಾರು ಸುತ್ತೋಲೆಗಳು ಮತ್ತು ನೆನಪೋಲೆಗಳನ್ನು ಹೊರಡಿಸಲಾಗಿದ್ದರೂ, ಇದುವರೆಗೂ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಪರಿಷ್ಕರಿಸುವ ಮತ್ತು ಪರಿಷ್ಕರಿಸದಿರುವ ಇಲಾಖೆಗಳು ಯಾವುವು; ಪರಿಷ್ಕರಿಸಿರುವ ಇಲಾಖೆಗಳಲ್ಲಿ ಪರಿಷ್ಕರಿಸಲು ಕಾರಣಗಳೇನು; ಪರಿಷ್ಕರಿಸದಿರುವ ಇಲಾಖೆಗಳಲ್ಲಿ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಪರಿಷ್ಕರಿಸುವ ಅಗತ್ಯವಿಲ್ಲವೇ; ಅಗತ್ಯವಿದ್ದಲ್ಲಿ, ಇದುವರೆಗೆ ಪರಿಷ್ಕರಿಸದಿರಲು ಕಾರಣಗಳೇನು; | 2002 ರ ಪೂರ್ವದಲ್ಲಿ ಸರ್ಕಾರದ ಎಲ್ಲಾ ಇಲಾಖೆಗಳ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯಿಂದ ರಚಿಸಿ ಪ್ರಕಟಿಸಲಾಗುತ್ತಿತ್ತು. ತರುವಾಯ ಇಂತಹ ನಿಯಮಗಳನ್ನು ಸಚಿವಾಲಯದ ಸಂಬಂಧಪಟ್ಟ ಇಲಾಖೆಗಳೇ ರಚಿಸಿ/ತಿದ್ದುಪಡಿ ಮಾಡುತ್ತಿವೆ. ಹಾಗೆ ನಿಯಮಗಳನ್ನು ರಚಿಸುವಾಗ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ಆರ್ಥಿಕ ಇಲಾಖೆ ಹಾಗೂ ಸಂಸದೀಯ ವ್ಯವಹಾರಗಳು ಮತ್ತು ಶಾಸನಾ ರಚನಾ ಇಲಾಖೆಗಳ ಅಭಿಪ್ರಾಯ ಪಡೆಯಬೇಕಾಗುತ್ತದೆ.<br><br>ಕರ್ನಾಟಕ ಸರ್ಕಾರ ಸಚಿವಾಲಯದ ಆಡಳಿತ ಇಲಾಖೆಗಳಡಿ ಬರುವ ಸುಮಾರು ಕ್ಷೇತ್ರ ಇಲಾಖೆಗಳು 2020ನೇ ಸಾಲಿನ ನಂತರದಲ್ಲಿ ವೃಂದ ಮತ್ತು ನೇಮಕಾತಿ ನಿಯಮಗಳ ಸಮಗ್ರ ಪರಿಷ್ಕರಣೆ ಕೈಗೊಂಡಿರುತ್ತವೆ (ವಿವರಗಳನ್ನು ಅನುಬಂಧ-1 ರಲ್ಲಿ ಲಗತ್ತಿಸಿದೆ) ಇನ್ನುಳಿದ ಇಲಾಖೆಗಳ ಕ್ಷೇತ್ರ ಇಲಾಖೆಗಳು ವೃಂದ ಮತ್ತು ನೇಮಕಾತಿ ನಿಯಮಗಳ ಸಮಗ್ರ ಪರಿಷ್ಕರಣೆ ಕೈಗೊಳ್ಳಬೇಕಾಗಿರುತ್ತದೆ. (ವಿವರಗಳನ್ನು ಅನುಬಂಧ-2 ರಲ್ಲಿ ಲಗತ್ತಿಸಿದೆ)<br><br>ವೃಂದ ಮತ್ತು ನೇಮಕಾತಿ ನಿಯಮಗಳನ್ನು ಈಗಾಗಲೇ ರೂಪಿಸಿ ಜಾರಿ ಮಾಡಿದ ಇಲಾಖೆಗಳು, ಕನಿಷ್ಠ ಮೂರು ವರ್ಷಗಳಿಗೊಮ್ಮೆ ಆ ನಿಯಮಗಳನ್ನು ಪುನರಾವಲೋಕಿಸಿ, ಹೊಸ ನಿಯಮಗಳನ್ನು ತಯಾರಿಸಿ ಜಾರಿಗೆ ತರಲು ಕ್ರಮ ಕೈಗೊಳ್ಳಬೇಕಾಗಿರುತ್ತದೆ ಹಾಗೂ ಇಲಾಖೆಯ ಅಗತ್ಯತೆಗಳಿಗೆ ಅನುಗುಣವಾಗಿ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಕಾಲಕಾಲಕ್ಕೆ ಪರಿಷ್ಕರಿಸಿ ಕೊಳ್ಳಬೇಕಾಗುತ್ತದೆ. |
| ಇ) | ವೃಂದ ಮತ್ತು ನೇಮಕಾತಿ ನಿಯಮಗಳನ್ನು ದೀರ್ಘಕಾಲದಿಂದ ಪರಿಷ್ಕರಿಸದಿರುವ ಇಲಾಖೆಗಳಲ್ಲಿ ಸಮಗ್ರವಾಗಿ ಪರಿಷ್ಕರಿಸುವ ಕುರಿತು ಸರ್ಕಾರ ಕ್ರಮ ವಹಿಸುವುದೇ; | ರಾಜ್ಯ ಸರ್ಕಾರದ ಎಲ್ಲಾ ಇಲಾಖೆ/ಅಧೀನ ಇಲಾಖೆಗಳಲ್ಲಿ ಚಾಲ್ತಿಯಲ್ಲಿರುವ ವೃಂದ ಮತ್ತು ನೇಮಕಾತಿ ನಿಯಮಗಳ ರಚನೆ/ಪರಿಷ್ಕರಣೆಗೆ ಸಂಬಂಧಿಸಿದಂತೆ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯಿಂದ ಕಾಲಕಾಲಕ್ಕೆ ಎಲ್ಲಾ ಇಲಾಖೆಗಳಿಗೆ ಸರ್ಕಾರದ ಆದೇಶ/ ಸುತ್ತೋಲೆಗಳ ಮೂಲಕ ಮಾರ್ಗಸೂಚಿಗಳನ್ನು ನೀಡಲಾಗಿದೆ. |

| | | |
|---|---|---|
| | ಹಾಗಿದ್ದಲ್ಲಿ, ಸರ್ಕಾರ ಯಾವುದಾದರೂ ಕಾಲಮಿತಿ ನಿಗದಿಪಡಿಸಿದೆಯೇ; ಹಾಗಿದ್ದಲ್ಲಿ, ಕನಿಷ್ಟ ಮೂರು ಗರಿಷ್ಠ ಆರು ತಿಂಗಳೊಳಗಾಗಿ ಪರಿಷ್ಕರಣೆ ಮಾಡುವ ಕುರಿತು ಸರ್ಕಾರ ಕ್ರಮ ಕೈಗೊಳ್ಳುವುದೇ; ಈ ಕುರಿತು ಸರ್ಕಾರದ ನಿಲುವೇನು; (ಮಾಹಿತಿ ನೀಡುವುದು) | ವೃಂದ ಮತ್ತು ನೇಮಕಾತಿ ನಿಯಮಗಳ ರಚನೆ/ತಿದ್ದುಪಡಿ ಪ್ರಸ್ತಾವನೆಗಳನ್ನು ಆಡಳಿತ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ /ಪ್ರಧಾನ ಕಾರ್ಯದರ್ಶಿ /ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿನ ವೃಂದ ಪರಿಶೀಲನಾ ಉಪಸಮಿತಿಯ ಸಭೆಯಲ್ಲಿ ಮಂಡಿಸುವ ಸಾಕಷ್ಟು ಪೂರ್ವದಲ್ಲಿ, ಏಕಕಾಲದಲ್ಲಿ (ಪ್ರತ್ಯೇಕವಾದ ಮೂರು ಕಡತಗಳಲ್ಲಿ), ಸಂಬಂಧಿಸಿದ ಆಡಳಿತ ಇಲಾಖೆಯು, ವಿವರವಾದ ಹಿನ್ನೆಲೆ ಟಿಪ್ಪಣಿಯೊಡನೆ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಸೇವಾ ನಿಯಮಗಳು), ಆರ್ಥಿಕ ಇಲಾಖೆ ಮತ್ತು ಸಂಸದೀಯ ವ್ಯವಹಾರಗಳ ಹಾಗೂ ಶಾಸನ ರಚನಾ ಇಲಾಖೆ, ಈ ಮೂರು ಇಲಾಖೆಗಳೊಂದಿಗೆ ಸಮಾಲೋಚಿಸಬೇಕಾಗಿರುತ್ತದೆ.<br>ಹೀಗೆ ಪರಿಶೀಲಿಸಿದ ಕರಡು ನಿಯಮಗಳನ್ನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನಾ ಇಲಾಖೆಯಿಂದ ಪರಿಶೋಧಿಸಿಕೊಂಡ ನಂತರ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿನ ವೃಂದ ಪರಿಶೀಲನಾ ಸಮಿತಿಯ ಮುಂದೆ ಮಂಡಿಸಬೇಕಾಗಿರುತ್ತದೆ.<br><br>ಈ ರೀತಿ ಪುನರಾವಲೋಕಿಸಿ ಅಂತಿಮಗೊಳಿಸಲಾದ ಕರಡು ನಿಯಮಗಳಿಗೆ ಕರ್ನಾಟಕ ಸರ್ಕಾರ ಸಚಿವಾಲಯದ ಸಂಬಂಧಿಸಿದ ಆಡಳಿತ ಇಲಾಖೆಯು ಸಚಿವ ಸಂಪುಟದ ಅನುಮೋದನೆಯನ್ನು ಪಡೆದು, ಅವುಗಳನ್ನು ಕರ್ನಾಟಕ ರಾಜ್ಯಪತ್ರದಲ್ಲಿ ಪ್ರಕಟಿಸಿ ಅವುಗಳಿಂದ ಬಾಧಿತರಾಗಬಹುದಾದವರಿಂದ ಆಕ್ಷೇಪಣೆ /ಸಲಹೆಗಳನ್ನು ಆಹ್ವಾನಿಸಬೇಕಾಗುತ್ತದೆ. ಸ್ವೀಕೃತವಾಗಿರುವ ಆಕ್ಷೇಪಣೆ/ಸಲಹೆಗಳಂತೆ ಕರಡು ನಿಯಮಗಳನ್ನು ಮಾರ್ಪಡಿಸಲು ಉದ್ದೇಶಿಸಿದಲ್ಲಿ, ವೃಂದ ಪರಿಶೀಲನಾ ಸಮಿತಿಯ ಅನುಮೋದನೆಯೊಂದಿಗೆ ಅಂತಿಮ ನಿಯಮಗಳನ್ನು ರಾಜ್ಯಪತ್ರದಲ್ಲಿ ಪ್ರಕಟಿಸಬೇಕಾಗುತ್ತದೆ. |
| ಈ | ಪರಿಷ್ಕರಿಸದಿರುವ ಇಲಾಖೆಗಳ ಮುಖ್ಯಸ್ಥರುಗಳ ಮೇಲೆ ಸರ್ಕಾರ ಕೈಗೊಳ್ಳುವ ಕ್ರಮವೇನು? (ಮಾಹಿತಿ ನೀಡುವುದು) | |

ಸಂಖ್ಯೆ: ಸಿಆಸುಇ 85 ಸೇನಿಡಿ 2025

(ಸಿದ್ದರಾಮಯ್ಯ)

**ಮುಖ್ಯಮಂತ್ರಿ**